KA / BG - GPO/ 2515 /WPP-47/ 2009 - 2011

# ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

ವಿಶೇಷ ಪತ್ರಿಕೆ

| ಭಾಗ – IV-A | ಬೆಂಗಳೂರು, ಮಂಗಳವಾರ, ಆಗಸ್ಟ್ ೧೮, ೨೦೦೯ (ಶ್ರಾವಣ ೨೭, ಶಕ ವರ್ಷ ೧೯೩೧) | ನಂ. ೭೧೧ |
|---|---|---|

ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಸಚಿವಾಲಯ

ಅಧಿಸೂಚನೆ

ಸಂಖ್ಯೆ: ಸಂವ್ಯಶಾಇ 30 ಶಾಸನ 2009, ಬೆಂಗಳೂರು, ದಿನಾಂಕ: 18ನೇ ಆಗಸ್ಟ್, 2009

ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ (ತಿದ್ದುಪಡಿ) ವಿಧೇಯಕ, 2009ಕ್ಕೆ 2009ರ ಆಗಸ್ಟ್ ತಿಂಗಳ ಹದಿನಾಲ್ಕನೇ ದಿನಾಂಕದಂದು ರಾಜ್ಯಪಾಲರ ಒಪ್ಪಿಗೆ ದೊರೆತಿದ್ದು, ಸಾಮಾನ್ಯ ತಿಳುವಳಿಕೆಗಾಗಿ ಇದನ್ನು 2009ರ ಕರ್ನಾಟಕ ಅಧಿನಿಯಮ ಸಂಖ್ಯೆ: 15 ಎಂಬುದಾಗಿ ಕರ್ನಾಟಕ ರಾಜ್ಯ ಪತ್ರದಲ್ಲಿ ಪ್ರಕಟಿಸಬೇಕೆಂದು ಆದೇಶಿಸಲಾಗಿದೆ.

## 2009ರ ಕರ್ನಾಟಕ ಅಧಿನಿಯಮ ಸಂಖ್ಯೆ:15

(2009ರ ಆಗಸ್ಟ್ ಹದಿನೆಂಟನೇ ದಿನಾಂಕದಂದು ಕರ್ನಾಟಕ ರಾಜ್ಯಪತ್ರದ ವಿಶೇಷ ಸಂಚಿಕೆಯಲ್ಲಿ ಮೊದಲು ಪ್ರಕಟವಾಗಿದೆ)

## ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ (ತಿದ್ದುಪಡಿ) ಅಧಿನಿಯಮ, 2009

(2009ರ ಆಗಸ್ಟ್ ಹದಿನಾಲ್ಕನೇ ದಿನಾಂಕದಂದು ರಾಜ್ಯಪಾಲರ ಅನುಮೋದನೆಯನ್ನು ಪಡೆಯಲಾಗಿದೆ)

ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ ಅಧಿನಿಯಮ, 2000 ನ್ನು ಮತ್ತಷ್ಟು ತಿದ್ದುಪಡಿ ಮಾಡಲು ಒಂದು ಅಧಿನಿಯಮ.

ಇಲ್ಲಿ ಇನ್ನು ಮುಂದೆ ಕಂಡುಬರುವ ಉದ್ದೇಶಗಳಿಗಾಗಿ ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ ಅಧಿನಿಯಮ, 2000 ನ್ನು (2001ರ ಕರ್ನಾಟಕ ಅಧಿನಿಯಮ 29) ಮತ್ತಷ್ಟು ತಿದ್ದುಪಡಿ ಮಾಡುವುದು ಯುಕ್ತವಾಗಿರುವುದರಿಂದ;

ಇದು ಭಾರತ ಗಣರಾಜ್ಯದ ಅರವತ್ತನೇ ವರ್ಷದಲ್ಲಿ ಕರ್ನಾಟಕ ರಾಜ್ಯ ವಿಧಾನಮಂಡಲದಿಂದ ಈ ಮುಂದಿನಂತೆ ಅಧಿನಿಯಮಿತವಾಗಲಿ, ಎಂದರೆ:-

1. ಸಂಕ್ಷಿಪ್ತ ಹೆಸರು ಮತ್ತು ಪ್ರಾರಂಭ.- (1) ಈ ಅಧಿನಿಯಮವನ್ನು ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ (ತಿದ್ದುಪಡಿ) ಅಧಿನಿಯಮ, 2009 ಎಂದು ಕರೆಯತಕ್ಕದ್ದು.

REGISTRAR
Davangere University
Davangere - 577 002

DAVANGERE UNIVERSITY * SHIVAGANGOTRI *
DMS DAVANGERE 577 002

(2) ಇದು ರಾಜ್ಯ ಸರ್ಕಾರವು ಅಧಿಸೂಚನೆಯ ಮೂಲಕ ಗೊತ್ತುಪಡಿಸಬಹುದಾದಂಥ ದಿನಾಂಕದಂದು ಜಾರಿಗೆ ಬರತಕ್ಕದ್ದು.

**2. 3ನೇ ಪ್ರಕರಣದ ತಿದ್ದುಪಡಿ.-** ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ ಅಧಿನಿಯಮ, 2000ದ (2001ರ ಕರ್ನಾಟಕ ಅಧಿನಿಯಮ 29) (ಇದರಲ್ಲಿ ಇನ್ನು ಮುಂದೆ ಮೂಲ ಅಧಿನಿಯಮವೆಂದು ಉಲ್ಲೇಖಿಸಲಾಗಿದೆ) 3ನೇ ಪ್ರಕರಣದ (1)ನೇ ಉಪಪ್ರಕರಣದಲ್ಲಿ,-

(1) (ಡಿ) ಖಂಡದಲ್ಲಿ, "ಚಿತ್ರದುರ್ಗ, ದಾವಣಗೆರೆ" ಎಂಬ ಪದಗಳನ್ನು ಬಿಟ್ಟುಬಿಡತಕ್ಕದ್ದು.

(2) (1ಬಿ) ಉಪಪ್ರಕರಣದ ತರುವಾಯ ಈ ಮುಂದಿನದನ್ನು ಸೇರಿಸತಕ್ಕದ್ದು, ಎಂದರೆ:-

"(1ಸಿ) ದಾವಣಗೆರೆಯಲ್ಲಿ ಕೇಂದ್ರ ಕಾರ್ಯಸ್ಥಾನವನ್ನು ಹೊಂದಿದ್ದು ದಾವಣಗೆರೆ ಹಾಗೂ ಚಿತ್ರದುರ್ಗ ಜಿಲ್ಲೆಗಳ ಅಧಿಕಾರ ಕ್ಷೇತ್ರ ವ್ಯಾಪ್ತಿಯನ್ನು ಹೊಂದಿರುವ ದಾವಣಗೆರೆ ವಿಶ್ವವಿದ್ಯಾನಿಲಯವನ್ನು ಸ್ಥಾಪಿಸತಕ್ಕದ್ದು."

**3. 5ನೇ ಪ್ರಕರಣದ ತಿದ್ದುಪಡಿ.-** ಮೂಲ ಅಧಿನಿಯಮದ 5ನೇ ಪ್ರಕರಣದಲ್ಲಿ (3)ನೇ ಉಪಪ್ರಕರಣದ ತರುವಾಯ ಈ ಮುಂದಿನ ಉಪ ಪ್ರಕರಣವನ್ನು ಸೇರಿಸತಕ್ಕದ್ದು, ಎಂದರೆ:-

"(4) ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ (ತಿದ್ದುಪಡಿ) ಅಧಿನಿಯಮ, 2009ರ ಪ್ರಾರಂಭದ ದಿನಾಂಕಕ್ಕೆ ಮೊದಲು ಚಿತ್ರದುರ್ಗ ಮತ್ತು ದಾವಣಗೆರೆ ಜಿಲ್ಲೆಗಳಲ್ಲಿ ಸ್ಥಾಪನೆಗೊಂಡ ಯಾವುದೇ ಕಾಲೇಜು ಅಥವಾ ಶೈಕ್ಷಣಿಕ ಸಂಸ್ಥೆಯು, ಕುವೆಂಪು ವಿಶ್ವವಿದ್ಯಾನಿಲಯದಿಂದ ಅನುಭವಿಸುತ್ತಿರುವ ಯಾವುದೇ ವಿಶೇಷಾಧಿಕಾರವನ್ನು ಈ ಸಂಬಂಧದಲ್ಲಿ ರಾಜ್ಯ ಸರ್ಕಾರವು ನಿರ್ದಿಷ್ಟಪಡಿಸಬಹುದಾದಂಥ ದಿನಾಂಕದಿಂದ ಜಾರಿಗೆ ಬರುವಂತೆ ಹಿಂತೆಗೆದುಕೊಳ್ಳಲಾಗಿದೆ ಎಂದು ಭಾವಿಸತಕ್ಕದ್ದು ಮತ್ತು ಕುವೆಂಪು ವಿಶ್ವವಿದ್ಯಾನಿಲಯದ ವಿಶೇಷಾಧಿಕಾರಗಳಿಗೆ ಈ ಹಿಂದೆ ಪ್ರವೇಶ ಪಡೆದುಕೊಂಡಿದ್ದ ಅಥವಾ ಸಂಯೋಜಿತವಾಗಿದ್ದ, ಎಲ್ಲ ಅಂಥ ಕಾಲೇಜುಗಳು ಅಥವಾ ಶೈಕ್ಷಣಿಕ ಸಂಸ್ಥೆಗಳು ದಾವಣಗೆರೆ ವಿಶ್ವವಿದ್ಯಾನಿಲಯದ ವಿಶೇಷಾಧಿಕಾರಗಳಿಗೆ ಪ್ರವೇಶ ಪಡೆದುಕೊಂಡಿವೆ ಎಂದು ಅಥವಾ ಅದಕ್ಕೆ ಸಂಯೋಜಿತವಾಗಿವೆ ಎಂದು ಭಾವಿಸತಕ್ಕದ್ದು."

**4. 14ನೇ ಪ್ರಕರಣದ ತಿದ್ದುಪಡಿ.-** ಮೂಲ ಅಧಿನಿಯಮದ 14ನೇ ಪ್ರಕರಣದಲ್ಲಿ, (4)ನೇ ಉಪಪ್ರಕರಣದ ನಾಲ್ಕನೇ ಪರಂತುಕದ ತರುವಾಯ ಈ ಮುಂದಿನ ಪರಂತುಕವನ್ನು ಸೇರಿಸತಕ್ಕದ್ದು, ಎಂದರೆ:-

"ಮತ್ತೂ ಪರಂತು, ಈ ಪ್ರಕರಣದಲ್ಲಿ ವಿರುದ್ಧವಾದುದು ಏನೇ ಇದ್ದರೂ, ರಾಜ್ಯ ಸರ್ಕಾರವು, ತಾನು ನಿರ್ದಿಷ್ಟಪಡಿಸಬಹುದಾದಂಥ ನಿಬಂಧನೆಗಳು ಮತ್ತು ಷರತ್ತುಗಳಿಗೊಳಪಟ್ಟು ದಾವಣಗೆರೆ ವಿಶ್ವವಿದ್ಯಾನಿಲಯದ ಪ್ರಥಮ ಕುಲಪತಿಯವರನ್ನು ನೇಮಕಮಾಡತಕ್ಕದ್ದು."

**5. ವಿಶೇಷಾಧಿಕಾರಿಯ ಅಧಿಕಾರಗಳು.-** ದಾವಣಗೆರೆ ವಿಶ್ವವಿದ್ಯಾನಿಲಯದ ಸ್ಥಾಪನೆಗಾಗಿ ಕ್ರಮ ಕೈಗೊಳ್ಳುವ ಉದ್ದೇಶಕ್ಕಾಗಿ ರಾಜ್ಯ ಸರ್ಕಾರವು ನೇಮಕಮಾಡಿದ ವಿಶೇಷಾಧಿಕಾರಿಯು, ಪ್ರಥಮ ಕುಲಪತಿಯವರ ನೇಮಕವಾಗುವವರೆಗೆ, ರಾಜ್ಯ ಸರ್ಕಾರವು ನಿರ್ದಿಷ್ಟಪಡಿಸಬಹುದಾದಂಥ ವಿಶ್ವವಿದ್ಯಾನಿಲಯದ ಮತ್ತು ಕುಲಪತಿಯವರ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಮತ್ತು ಅಂಥ ಪ್ರಕಾರ್ಯಗಳನ್ನು ನೆರವೇರಿಸತಕ್ಕದ್ದು.

**6. ಪ್ರಥಮ ಕುಲಪತಿಯವರ ಕರ್ತವ್ಯಗಳು.-** (1) ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ (ತಿದ್ದುಪಡಿ) ಅಧಿನಿಯಮ, 2009ರ ಪ್ರಾರಂಭದಿಂದ ಆರು ತಿಂಗಳುಗಳೊಳಗೆ ಅಥವಾ ಕುಲಾಧಿಪತಿಯವರು ನಿರ್ದೇಶಿಸಬಹುದಾದಂತೆ ಒಂದು ವರ್ಷಕ್ಕೆ ಮೀರದಂಥ ದೀರ್ಘ ಅವಧಿಯೊಳಗೆ, ದಾವಣಗೆರೆ ವಿಶ್ವವಿದ್ಯಾನಿಲಯದ

ಸಿಂಡಿಕೇಟ್, ವಿದ್ಯಾವಿಷಯಕ ಪರಿಷತ್ತು ಮತ್ತು ಇತರ ಪ್ರಾಧಿಕಾರಗಳ ರಚನೆಗಾಗಿ ಏರ್ಪಾಡುಗಳನ್ನು ಮಾಡುವುದು ಪ್ರಥಮ ಕುಲಪತಿಯವರ ಕರ್ತವ್ಯವಾಗಿರತಕ್ಕದ್ದು.

(2) (1)ನೇ ಉಪ ಪ್ರಕರಣದ ಅಡಿಯಲ್ಲಿ ರಚಿತವಾದ ಪ್ರಾಧಿಕಾರಗಳು, ಈ ಸಂಬಂಧದಲ್ಲಿ ಕುಲಾಧಿಪತಿಯವರು ನಿರ್ದಿಷ್ಟಪಡಿಸಬಹುದಾದಂಥ ದಿನಾಂಕದಂದು ತಮ್ಮ ಪ್ರಕಾರ್ಯಗಳನ್ನು ಚಲಾಯಿಸಲು ಪ್ರಾರಂಭಿಸತಕ್ಕದ್ದು.

7. **ತಾತ್ಕಾಲಿಕ ಉಪಬಂಧಗಳು.-** (1) ತಿದ್ದುಪಡಿ ಅಧಿನಿಯಮದ ಮೂಲಕ ತಿದ್ದುಪಡಿಯಾದ ಮೂಲ ಅಧಿನಿಯಮದಲ್ಲಿ ಏನೇ ಇದ್ದರೂ, ಪ್ರಥಮ ಕುಲಪತಿಯವರು, ಕುಲಾಧಿಪತಿಯವರ ಪೂರ್ವಾನುಮೋದನೆಯೊಂದಿಗೆ ಈ ತಿದ್ದುಪಡಿ ಅಧಿನಿಯಮದ ಮೂಲಕ ತಿದ್ದುಪಡಿಯಾದ ಮೂಲ ಅಧಿನಿಯಮದ ಉಪಬಂಧಗಳನ್ನು ಕಾರ್ಯಗತಗೊಳಿಸುವ ಉದ್ದೇಶಕ್ಕಾಗಿ, ದಾವಣಗೆರೆ ವಿಶ್ವವಿದ್ಯಾನಿಲಯದ ಎಲ್ಲಾ ಅಥವಾ ಯಾವುವೇ ಪ್ರಕಾರ್ಯಗಳನ್ನು ನಿರ್ವಹಿಸಬಹುದು ಮತ್ತು ಆ ಉದ್ದೇಶಕ್ಕಾಗಿ ತಿದ್ದುಪಡಿ ಅಧಿನಿಯಮದ ಮೂಲಕ ತಿದ್ದುಪಡಿಯಾದ ಮೂಲ ಅಧಿನಿಯಮದಲ್ಲಿ ಉಪಬಂಧಿಸಲಾದಂತೆ ವಿಶ್ವವಿದ್ಯಾನಿಲಯದ ಯಾವುದೇ ಪ್ರಾಧಿಕಾರವು, ಚಲಾಯಿಸಬೇಕಾಗಿದ್ದ ಅಥವಾ ನಿರ್ವಹಿಸಬೇಕಾಗಿದ್ದ ಯಾವುವೇ ಅಧಿಕಾರವನ್ನು ಅಥವಾ ಕರ್ತವ್ಯವನ್ನು, ತಿದ್ದುಪಡಿ ಅಧಿನಿಯಮದ ಮೂಲಕ ತಿದ್ದುಪಡಿಯಾದ ಮೂಲ ಅಧಿನಿಯಮದಲ್ಲಿ ಉಪಬಂಧಿಸಿರುವಂತೆ ಅದು ಅಸ್ತಿತ್ವಕ್ಕೆ ಬರುವವರೆಗೆ, ಚಲಾಯಿಸಬಹುದು ಅಥವಾ ನಿರ್ವಹಿಸಬಹುದು.

(2) ಮೂಲ ಅಧಿನಿಯಮದ 5ನೇ ಪ್ರಕರಣದ ಅಡಿಯಲ್ಲಿ ದಾವಣಗೆರೆ ವಿಶ್ವವಿದ್ಯಾನಿಲಯಕ್ಕೆ ಸಂಯೋಜಿಸಲಾದ ಕಾಲೇಜುಗಳಿಗೆ ಅಥವಾ ಇತರ ಶಿಕ್ಷಣ ಸಂಸ್ಥೆಗಳಿಗೆ ಅನ್ವಯವಾಗತಕ್ಕ ಕುವೆಂಪು ವಿಶ್ವವಿದ್ಯಾನಿಲಯವು ರಚಿಸಿದ ಎಲ್ಲ ಪರಿನಿಯಮಗಳು, ಆರ್ಡಿನೆನ್ಸ್‌ಗಳು, ವಿನಿಯಮಗಳು ಮತ್ತು ನಿಯಮಗಳನ್ನು ದಾವಣಗೆರೆ ವಿಶ್ವವಿದ್ಯಾನಿಲಯವು ರಚಿಸಿದ ಪರಿನಿಯಮಗಳು, ಆರ್ಡಿನೆನ್ಸ್‌ಗಳು, ವಿನಿಯಮಗಳು ಮತ್ತು ನಿಯಮಗಳೆಂದು ಭಾವಿಸತಕ್ಕದ್ದು ಮತ್ತು ಅವು ದಾವಣಗೆರೆ ವಿಶ್ವವಿದ್ಯಾನಿಲಯವು ತನ್ನದೇ ಆದ ಪರಿನಿಯಮಗಳು, ಆರ್ಡಿನೆನ್ಸ್‌ಗಳು, ವಿನಿಯಮಗಳು ಅಥವಾ ನಿಯಮಗಳನ್ನು ರಚಿಸುವವರೆಗೆ ಹಾಗೆಯೇ ಮುಂದುವರಿಯತಕ್ಕದ್ದು:

ಪರಂತು, ಕುಲಪತಿಯವರು, ಕುಲಾಧಿಪತಿಯವರ ಅನುಮೋದನೆಯೊಡನೆ ತಾವು ಅವಶ್ಯಕವೆಂದು ಪರಿಗಣಿಸಬಹುದಾದಂಥ ಮಾರ್ಪಾಡುಗಳನ್ನು ಅಥವಾ ಅಳವಡಿಕೆಗಳನ್ನು ಅದರಲ್ಲಿ ಮಾಡಬಹುದು.

8. **ಕೆಲವು ಪರೀಕ್ಷೆಗಳಿಗೆ ಸಂಬಂಧಿಸಿದಂತೆ ಉಳಿಸುವಿಕೆ.-** ತಿದ್ದುಪಡಿ ಅಧಿನಿಯಮದ ಮೂಲಕ ತಿದ್ದುಪಡಿಯಾದ ಮೂಲ ಅಧಿನಿಯಮದಲ್ಲಿ ಅಥವಾ ತಿದ್ದುಪಡಿ ಅಧಿನಿಯಮದ ಪ್ರಾರಂಭದ ನಿಕಟಪೂರ್ವದಲ್ಲಿ ಅದರ ಅಡಿಯಲ್ಲಿ ರಚಿಸಿದ ಪರಿನಿಯಮಗಳಲ್ಲಿ, ಆರ್ಡಿನೆನ್ಸ್‌ಗಳಲ್ಲಿ, ವಿನಿಯಮಗಳಲ್ಲಿ ಅಥವಾ ನಿಯಮಗಳಲ್ಲಿ ಏನೇ ಇದ್ದರೂ,-

(ಎ) ಜಾರಿಯಲ್ಲಿರುವ ಪರಿನಿಯಮಗಳಿಗೆ, ಆರ್ಡಿನೆನ್ಸ್‌ಗಳಿಗೆ, ವಿನಿಯಮಗಳಿಗೆ ಅಥವಾ ನಿಯಮಗಳಿಗೆ ಅನುಸಾರವಾಗಿ, ಕುವೆಂಪು ವಿಶ್ವವಿದ್ಯಾನಿಲಯದ ಪದವಿಗಾಗಿ ವ್ಯಾಸಂಗ ಮಾಡುತ್ತಿರುವ ಯಾವೊಬ್ಬ ವಿದ್ಯಾರ್ಥಿಯು, ದಾವಣಗೆರೆ ವಿಶ್ವವಿದ್ಯಾನಿಲಯವು ಅಂಥ ಪರೀಕ್ಷೆಯನ್ನು ವ್ಯವಸ್ಥೆಗೊಳಿಸುವವರೆಗೆ, ಕುವೆಂಪು ವಿಶ್ವವಿದ್ಯಾನಿಲಯದ ಪರೀಕ್ಷೆಗೆ ಪ್ರವೇಶ ಪಡೆಯತಕ್ಕದ್ದು ಮತ್ತು ಅಂಥ ಪರೀಕ್ಷೆಯ ಫಲಿತಾಂಶದ ಆಧಾರದ ಮೇಲೆ ಅವನು ಅರ್ಹನಾಗುವ ಪದವಿ ಅಥವಾ ಡಿಪ್ಲೋಮಾವನ್ನು ಅವನಿಗೆ ಪ್ರದಾನ ಮಾಡತಕ್ಕದ್ದು.

(ಬಿ) ಕುವೆಂಪು ವಿಶ್ವವಿದ್ಯಾನಿಲಯವು ಯಾವುದೇ ಪರೀಕ್ಷೆಯನ್ನು ನಡೆಸಿದ್ದು, ಅದರ ಫಲಿತಾಂಶವು ಪ್ರಕಟವಾಗಿ ಅದಕ್ಕೆ ಸಂಬಂಧಪಟ್ಟ ಪದವಿ ಅಥವಾ ಡಿಪ್ಲೋಮಾವನ್ನು ಪ್ರದಾನ ಮಾಡಿರದಿದ್ದರೆ ಅಥವಾ ನೀಡಿರದಿದ್ದರೆ ಅಥವಾ ಅಂಥ ಯಾವುದೇ ಪರೀಕ್ಷೆಯ ಫಲಿತಾಂಶವನ್ನು ಕುವೆಂಪು ವಿಶ್ವವಿದ್ಯಾನಿಲಯವು ಪ್ರಕಟಿಸಿರದಿದ್ದರೆ, ಆಗ ಅಂಥ ಪರೀಕ್ಷೆಯನ್ನು ಕುವೆಂಪು ವಿಶ್ವವಿದ್ಯಾನಿಲಯವು ನಡೆಸಿದೆ ಎಂದು ಭಾವಿಸತಕ್ಕದ್ದು.

DAVANGERE UNIVERSITY SHIVAGANGOTHRI IMS DAVANGERE -577 002.

9. ತೊಂದರೆಗಳ ನಿವಾರಣೆ.- ತಿದ್ದುಪಡಿ ಅಧಿನಿಯಮದ ಉಪಬಂಧಗಳನ್ನು ಜಾರಿಗೊಳಿಸುವಲ್ಲಿ ಯಾವುದೇ ತೊಂದರೆ ಉದ್ಭವಿಸಿದರೆ, ರಾಜ್ಯ ಸರ್ಕಾರವು ತೊಂದರೆಯನ್ನು ನಿವಾರಿಸುವ ಉದ್ದೇಶಕ್ಕಾಗಿ ಅವಶ್ಯವೆಂದು ಅಥವಾ ಸೂಕ್ತವೆಂದು ತನಗೆ ಕಂಡುಬರಬಹುದಾದಂಥ ಉಪಬಂಧವನ್ನು ಸರ್ಕಾರಿ ರಾಜ್ಯ ಪತ್ರದಲ್ಲಿ ಆದೇಶವನ್ನು ಪ್ರಕಟಿಸುವ ಮೂಲಕ ರಚಿಸಬಹುದು:

ಪರಂತು, ಈ ತಿದ್ದುಪಡಿ ಅಧಿನಿಯಮವು ಪ್ರಾರಂಭವಾದ ದಿನಾಂಕದಿಂದ ಎರಡು ವರ್ಷಗಳ ಅವಧಿ ಮುಕ್ತಾಯವಾದ ತರುವಾಯ ಅಂಥ ಯಾವ ಆದೇಶವನ್ನೂ ಮಾಡತಕ್ಕದ್ದಲ್ಲ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ,

ಜಿ.ಕೆ.ಬೋರೇಗೌಡ

ಸರ್ಕಾರದ ಕಾರ್ಯದರ್ಶಿ

ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಇಲಾಖೆ

DAVANGERE UNIVERSITY IMS DAVANGERE -577 002. SHIVAGANGOTHRI

ಸರ್ಕಾರಿ ಮುದ್ರಣಾಲಯ, ವಿಕಾಸ ಸೌಧ ಘಟಕ, ಬೆಂಗಳೂರು.

12(B)

Ph. 23236351, 23232701, 23237721, 23234116
23235733, 23232317, 23236735, 23239437

www.ugc.ac.in.

विश्वविद्यालय अनुदान आयोग
बहादुरशाह जफर मार्ग
नई दिल्ली-110 002
UNIVERSITY GRANTS COMMISSION
BAHADURSHAH ZAFAR MARG
NEW DELHI-110 002

ज्ञान-विज्ञान विमुक्तये

**Speed Post**

F.No. 9-40/2009 (CPP-I/PU) July, 2010

UGC file

The Registrar,
Davangere University,
Shivagangothri,
Davangere – 577 002,
Karnataka.

1 JUL 2010

Sub:- Proposal of Davangere University, Shivagangothri, Davangere – 577 002, Karnataka (State University) to declare it fit to receive central assistance under section 12(B) of the UGC Act, 1956.

Sir,

I am directed to say that UGC Expert Committee visited Davangere University, Shivagangothri, Davangere – 577 002, (Karnataka) to assess its proposal for declaring it fit to receive central assistance under section 12 (B) of the UGC Act on 17th– 18th May, 2010. The report of the Expert Committee was considered by the Commission in its 470th meeting held on 7th June, 2010 (Item No. 5.02). The Commission resolved as under:-

**"The Commission considered the Report of the Expert Committee constituted by Chairman, UGC and approved Davangere University, Shivagangothri, Davangere – 577 002, Karnataka to receive central assistance under Section 12(B) of the UGC Act, 1956."**

A copy of Report of Expert Committee has been sent to Davangere University, Karnataka vide this office OM of even number dated July, 2010 (copy attached)

The University may note and adhere to the following: -

i) To ensure that no off campus centre(s)/study centre and the centers operating through franchises is opened by the University outside the territorial jurisdiction of the State in view of the judgement of Hon'ble Supreme Court of India in case of Prof. Yashpal vs. State of Chhattisgarh.

ii) In case the university has already started any off-campus/study centre and the centre operating through franchises outside the State, it must be closed immediately.

iii) No distance education programmes shall be started without the prior approval of Distance Education Council, IGNOU, New Delhi.

..2

30 SEP 2011
1607

REGISTRAR
Davangere University
Davangere - 577 002

Further, the University may take action on the suggestions of the Expert Committee under intimation to UGC.

Yours faithfully,

वि. जायसवाल

**(V.K. Jaiswal)**
Deputy Secretary

Encl: As above.

**Copy to:-**

1. The Secretary, Government of India, Ministry of Human Resource Development, (Department of Secondary & Higher Education), Shastri Bhavan, New Delhi-110 001.
2. The Secretary to the State Government of Karnataka, Department of Higher Education, Banglore, Karnataka.
3. SO (Meeting) UGC, New Delhi (ATN UGC item No. 5.02 dt. 07.06.2010)
4. P.O. (Website) UGC, New Delhi.
5. DS (FD)/SO (FD), UGC New Delhi.
6. DS (SU)/XIth Plan UGC, New Delhi.

**(V.K. Jaiswal)**
Deputy Secretary

REGISTRAR
Davangere University
Davangere - 577 002

23236351, 23232701, 23237721, 23234116
23235733, 23232317, 23236735, 23239437

www.ugc.ac.in.

विश्वविद्यालय अनुदान आयोग
बहादुरशाह जफर मार्ग
नई दिल्ली-110 002
UNIVERSITY GRANTS COMMISSION
BAHADURSHAH ZAFAR MARG
NEW DELHI-110 002

ज्ञान-विज्ञान विमुक्तये

**Speed Post**

F.9-40/2009 (CPP-I/PU)

July, 2010

**OFFICE MEMORANDUM**

Davangere University, Shivagangothri, Davangere, (Karnataka) has been established by Government of Karnataka through Universities (Amendment) Bill, 2009 (L.A. Bill No. 33 of 2009) of Karnataka State legislature and notified vide ED 77/URC/2009 dated 18.08.2009. The University is now declared eligible to receive Central assistance in terms of Rules framed under section 12 (B) of the UGC Act, 1956.

वि. जायसवाल

**(V.K. Jaiswal)**
Deputy Secretary

**Copy to:-**

1. The Vice - Chancellor, Davangere University, Shivagangothri, Davangere – 577 002, (Karnataka) along with a copy of the report of UGC Expert Committee.
2. The Secretary, Government of India, Ministry of Human Resource Development, (Department of Secondary & Higher Education), Shastri Bhavan, New Delhi-110 001.
3. The Secretary to the State Government of Karnataka, Department of Higher Education, Banglore, Karnataka.
4. The Director of Higher Education, State Government of Karnataka, Banglore.
5. The Secretary General, Association of Indian Universities, 16 Kotla Marg, New Delhi-110 002.
6. Director, National Assessment and Accreditation Council (NAAC), Bangalore-560 010.
7. The Joint Secretary, State Universities, UGC, New Delhi.
8. Senior Statistical Officer, UGC, 35, Ferozshah Road, New Delhi-110 001.
9. Publication Officer (web-site), UGC, New Delhi.
10. Guard file.

वि. जायसवाल

**(V.K. Jaiswal)**
Deputy Secretary

REGISTRAR
Davangere University
Davangere - 577 002

2(4)

Ph 23236351, 23232701, 23237721, 23234116
23235733, 23232317, 23236735, 23239437

विश्वविद्यालय अनुदान आयोग
बहादुरशाह ज़फर मार्ग
नई दिल्ली-110 002
UNIVERSITY GRANTS COMMISSION
BAHADURSHAH ZAFAR MARG
NEW DELHI-110 002

**Speed Post**

No. F.9-40/2009(CPP-I/PU)

December, 2009

2 5 JAN 2010

The Registrar,
Davangere University,
Shivagangothri
Davangere – 577 002
**Karnataka.**

Subject: Establishment of Davangere University, Davangere, Karnataka.

Sir,

With reference to your Letter No. DU/VC/417/2009-10 dated 02.11.2009 on the subject cited above, I am directed to say you that the Davangere University, Karnataka with headquarter at Davangere and territorial jurisdiction extending over the district of Davangere and Chitradurga has been established by Karnataka State Universities (Amendment) Bill, 2009 (L.A. Bill No. 33 of 2009) vide Notification No. ED 77/URC/2009 dated 18.08.2009 as a State University and is empowered to award degrees as specified by the UGC under section 22 of the UGC Act 1956 through its main campus and with the approval of statutory councils, wherever required.

The University may note and adhere to the following: -

i) To ensure that no off campus centre(s)/study centre and the centres operating through franchises is opened by the University outside the territorial jurisdiction of the State in view of the judgement of Hon'ble Supreme Court of India in case of Prof. Yashpal vs. Government of Chhattisgarh.

ii) In case the university has already started any off-campus/study centre and the centre operating through franchises outside the State, it must be closed immediately.

iii) No distance education programmes shall be started without the prior approval of Joint Committee of UGC-AICTE-DEC for which DEC is the Coordinating Authority.

I am further directed to enclose herewith a copy of the prescribed format and request you to furnish the detailed information for inspection purpose under 12(B) within one month from the date of issue of this letter.

SEP 2011
1598.

Yours faithfully

(S.C. Chadha)
Deputy Secretary

Encl: As above

REGISTRAR
Davangere University
Davangere - 577 002